## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೋವಿಡ್-19 ಪ್ರಯುಕ್ತ ವಿದ್ಯುತ್ ಮಗ್ಗ ನೇಕಾರರಿಗೆ ಆರ್ಥಿಕ ಬೆಂಬಲ ನೀಡುವ ಕುರಿತು.

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ: ವಾಕೈ 47 JAKY 2020, ದಿನಾಂಕ: 15.05.2020.
2. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕೈಜಇ/ ಟಿ1/ ಕೋವಿಡ್ -19/ ವಿ.ಪ/ 2020-21, ದಿನಾಂಕ:07.05.2020.
3. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕೈಜಇ/ ಟಿ1/ ಕೋವಿಡ್ -19/ ವಿ.ಮಗ್ಗ.ಪರಿಹಾರ/ 2020-21, ದಿನಾಂಕ:19.05.2020.

***********

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಪ್ರಸ್ತುತ ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ಭಾರತದಾದ್ಯಂತ ಲಾಕ್ ಡೌನ್ ಆಗಿರುವ ಹಿನ್ನೆಲೆಯಲ್ಲಿ, ನೇಕಾರರು ಸಂಕಷ್ಟದಲ್ಲಿರುವುದರಿಂದ, ಕೈಮಗ್ಗ ನೇಕಾರರಿಗೆ ನೇಕಾರರ ಸಮ್ಮಾನ್ ಯೋಜನೆಯನ್ನು ಘೋಷಿಸಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ ರವರು ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ಭಾರತದಾದ್ಯಂತ ಲಾಕ್ ಡೌನ್ ಪರಿಸ್ಥಿತಿಯಲ್ಲಿ ವಿದ್ಯುತ್ ಮಗ್ಗ ನೇಕಾರರೂ ಸಹ ಸಂಕಷ್ಟದಲ್ಲಿರುವುದರಿಂದ ಈ ಸಮಯದಲ್ಲಿ ರಾಜ್ಯದಲ್ಲಿರುವ ವಿದ್ಯುತ್ ಮಗ್ಗ ನೇಕಾರರಿಗೆ ತಲಾ ರೂ.2000/- (ಎರಡು ಸಾವಿರ ರೂಪಾಯಿಗಳು ಮಾತ್ರ) ಗಳಂತೆ ಆರ್ಥಿಕ ಬೆಂಬಲವನ್ನು ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಮೇಲೆ ಓದಲಾದ (3)ರ ಪತ್ರದಲ್ಲಿ ಜವಳಿ ಅಭಿವೃದ್ಧಿ ಆಯುಕ್ತರು ವಿವರವಾದ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಗಳನ್ನು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿ, ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:** ವಾಕೈ 49 JAKY 2020 **ದಿನಾಂಕ:26.05.2020**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಪ್ರಸ್ತುತ ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ಭಾರತದಾದ್ಯಂತ ಲಾಕ್ ಡೌನ್ ಪರಿಸ್ಥಿತಿಯಲ್ಲಿ ವಿದ್ಯುತ್ ಮಗ್ಗ ನೇಕಾರರೂ ಸಹ ಸಂಕಷ್ಟದಲ್ಲಿರುವುದರಿಂದ ಕರ್ನಾಟಕ ರಾಜ್ಯದಲ್ಲಿರುವ 1.25 ಲಕ್ಷ ವಿದ್ಯುತ್ ಚಾಲಿತ ಘಟಕ(ಮಗ್ಗ)ಗಳಲ್ಲಿ ಪ್ರತಿ ವಿದ್ಯುತ್ ಚಾಲಿತ ಘಟಕ(ಮಗ್ಗ)ಗಳಲ್ಲಿ ಕೆಲಸ ಮಾಡುತ್ತಿರುವ ಒಬ್ಬ ಕೂಲಿ ಕಾರ್ಮಿಕರಿಗೆ ಒಂದು ಬಾರಿಗೆ ಮಾತ್ರ

ಅನ್ವಯಿಸುವಂತೆ ರೂ.2000/- (ಎರಡು ಸಾವಿರ ರೂಪಾಯಿಗಳು ಮಾತ್ರ) ಗಳಂತೆ ಒಟ್ಟು ರೂ.25.00 ಕೋಟಿಗಳನ್ನು ಪರಿಹಾರ ಧನವನ್ನಾಗಿ ಮಂಜೂರು ಮಾಡಿ ಈ ಕೆಳಕಂಡ ಷರತ್ತಿಗೊಳಪಟ್ಟು ಆದೇಶಿಸಿದೆ:-

1. **ಫಲಾನುಭವಿ ಅರ್ಹತೆ:**

   - ಫಲಾನುಭವಿಯು ವಿದ್ಯುತ್ ಮಗ್ಗ ಘಟಕದಲ್ಲಿ ಕೂಲಿ ಕಾರ್ಮಿಕನಾಗಿ ಅಥವಾ ಸ್ವತಃ ಕಾರ್ಮಿಕನಾಗಿ ಕೆಲಸ ಮಾಡುತ್ತಿರುವವರು.
   - 01 ರಿಂದ 20 ಹೆಚ್.ಪಿ. ವರೆಗೆ ವಿದ್ಯುತ್ ರಿಯಾಯಿತಿ ಯೋಜನೆಯಡಿ ಸೌಲಭ್ಯ ಪಡೆಯುತ್ತಿರುವ ವಿದ್ಯುತ್ ಮಗ್ಗ ಘಟಕಗಳಿಗೆ ಮಾತ್ರ ಅನ್ವಯಿಸುತ್ತದೆ.

2. **ಹಣಕಾಸಿನ ನೆರವು:**

   - ಪ್ರತಿ ವಿದ್ಯುತ್ ಚಾಲಿತ ಘಟಕ (ಮಗ್ಗ)ದಲ್ಲಿ ಕೆಲಸ ಮಾಡುತ್ತಿರುವ ಒಬ್ಬ ಕೂಲಿ ಕಾರ್ಮಿಕರಿಗೆ ಒಂದು ಬಾರಿಗೆ ಮಾತ್ರ ಅನ್ವಯಿಸುವಂತೆ ರೂ.2000/- ಗಳನ್ನು ನೀಡಲು ಉದ್ದೇಶಿಸಲಾಗಿದೆ.
   - ಫಲಾನುಭವಿಗಳ ಆಧಾರ್ ಕಾರ್ಡ್‌ನ ವಿವರಗಳನ್ನು ಪಡೆದುಕೊಂಡು, ಹಣವನ್ನು ಖಜಾನೆ-2ರಲ್ಲಿರುವ ನೇರ ನಗದು ನಿರ್ವಹಣೆ (DBT) ಮುಖಾಂತರ ಪಾವತಿಸತಕ್ಕದ್ದು.
   - ಫಲಾನುಭವಿಗಳ ವಿವರಗಳನ್ನು ಸಂಗ್ರಹಿಸಲು ಪ್ರತ್ಯೇಕವಾಗಿ ತಂತ್ರಾಂಶವೇನಾದರೂ ಅಗತ್ಯವಿದ್ದಲ್ಲಿ ಅದನ್ನು ಜವಳಿ ಅಭಿವೃದ್ಧಿ ಆಯುಕ್ತರ ಕಚೇರಿಯಲ್ಲಿಯೇ ಅಥವಾ ಇ-ಆಡಳಿತದ ಮುಖಾಂತರ ಅಭಿವೃದ್ಧಿಪಡಿಸತಕ್ಕದ್ದು.
   - ಆರ್ಥಿಕ ಇಲಾಖೆಯು ಸೂಚಿಸಿರುವಂತೆ, ಒಟ್ಟು ಘಟಕಗಳ ಸಂಖ್ಯೆ 1.25 ಲಕ್ಷ ಹಾಗೂ ವಿದ್ಯುತ್ ಚಾಲಿತ ಘಟಕದಲ್ಲಿ ಕೆಲಸ ಮಾಡುತ್ತಿರುವ ಒಬ್ಬ ಕೂಲಿ ಕಾರ್ಮಿಕರಿಗೆ ಒಂದು ಬಾರಿ ನೀಡುವ ಪರಿಹಾರ ಧನದ ಆರ್ಥಿಕ ಹೊರೆಯು ರೂ.25.00 ಕೋಟಿ ಮೀರತಕ್ಕದ್ದಲ್ಲ.

3. **ಫಲಾನುಭವಿಗಳು ಸಲ್ಲಿಸಬೇಕಾದ ದಾಖಲೆಗಳು:**

   - ಸಾಮಾನ್ಯ ನಮೂನೆಯಲ್ಲಿ ಫಲಾನುಭವಿ(ಕೂಲಿ ಕಾರ್ಮಿಕರ)ಯ ಅರ್ಜಿ(ಆನ್ ಲೈನ್ ಮುಖಾಂತರ).
   - ಕೂಲಿ ಕಾರ್ಮಿಕರ ಆಧಾರ್ ಕಾರ್ಡ್ ಪ್ರತಿ.
   - ಕೂಲಿ ಕಾರ್ಮಿಕರ ಆಧಾರ್ ಸಂಖ್ಯೆ ಲಿಂಕ್ ಮಾಡಿದ ಬ್ಯಾಂಕ್ ಖಾತೆಯ ಪಾಸ್ ಬುಕ್ ಪ್ರತಿ.
   - ಕೂಲಿ ಕಾರ್ಮಿಕರು ವಿದ್ಯುತ್ ಮಗ್ಗ ಘಟಕದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ ದಾಖಲಾತಿ(ಫೋಟೋ).
   - ಘಟಕದ ವಿದ್ಯುತ್ ಸಂಪರ್ಕ ಹೊಂದಿರುವ ಆರ್.ಆರ್.ನಂ & ಕಳೆದ ತಿಂಗಳ ವಿದ್ಯುತ್ ಬಿಲ್.
   - ಘಟಕದ ಉದ್ಯೋಗ್ ಆಧಾರ್ / ಪಿ.ಎಂ.ಟಿ/ ಉದ್ದಿಮೆದಾರರ ಪರವಾನಗಿ ಪತ್ರ.
   - ಘಟಕದಲ್ಲಿ ಕಾರ್ಯನಿರ್ವಹಿಸುವ ಕೂಲಿ ನೇಕಾರರ ವಿವರಗಳನ್ನು ಒಳಗೊಂಡ ಮಜೂರಿ ಪಾವತಿಯ ಪ್ರತಿ (ಲಭ್ಯವಿದ್ದಲ್ಲಿ).
   - ಮಾಲೀಕರಿಂದ ಕೂಲಿ ನೇಕಾರರ ಮಾಹಿತಿಯ ಕುರಿತು ರೂ.20/- ರ ಛಾಪಾ ಕಾಗದದಲ್ಲಿ ಮುಚ್ಚಳಿಕೆ ಪತ್ರ.

4. **ಅನುಷ್ಠಾನ**

   - ಕೈಮಗ್ಗ ಮತ್ತು ಜವಳಿ ಇಲಾಖೆಯ ಜಿಲ್ಲಾ ಮಟ್ಟದ ಉಪ / ಸಹಾಯಕ ನಿರ್ದೇಶಕರುಗಳು ಕೂಲಿ ಕಾರ್ಮಿಕರು ಅರ್ಜಿಗಳನ್ನು ಆನ್ ಲೈನ್ ಮುಖಾಂತರ ಸಲ್ಲಿಸುವ ಕುರಿತು ಅಗತ್ಯ ಸೇವೆ ಒದಗಿಸುವುದು.

- ಕೈಮಗ್ಗ ಮತ್ತು ಜವಳಿ ಇಲಾಖೆಯ ಜಿಲ್ಲಾ ಮಟ್ಟದ ಉಪ / ಸಹಾಯಕ ನಿರ್ದೇಶಕರುಗಳು ಜವಳಿ ಅಭಿವೃದ್ಧಿ ಆಯುಕ್ತರ ಕಛೇರಿಯ ಮಾರ್ಗದರ್ಶನಗಳಡಿಯಲ್ಲಿ ಅನುಷ್ಠಾನಗೊಳಿಸತಕ್ಕದ್ದು.
- ಯೋಜನೆಯನ್ನು ಯಾವ ಫಲಾನುಭವಿಗಳಿಗಾಗಿ ಘೋಷಣೆ ಮಾಡಲಾಗಿದೆಯೋ ಅವರನ್ನು ಮಾತ್ರ ಪರಿಗಣಿಸತಕ್ಕದ್ದು.
- ಫಲಾನುಭವಿಗಳ ಮಾಹಿತಿಯನ್ನು ಸಂಗ್ರಹಿಸಲು ಸೂಕ್ತ ಕ್ರಮಕೈಗೊಳ್ಳತಕ್ಕದ್ದು.
- ಫಲಾನುಭವಿಗಳು ಪುನರಾವರ್ತನೆಯಾಗದಂತೆ ಎಚ್ಚರವಹಿಸತಕ್ಕದ್ದು.
- ವಿಭಾಗ ಮಟ್ಟದ ಅಧಿಕಾರಿಗಳು ಯೋಜನೆಯ ಅನುಷ್ಠಾನದ ಕುರಿತು ಪರಿವೀಕ್ಷಣೆ ಮಾಡತಕ್ಕದ್ದು.

ಪ್ರಸ್ತಾವಿತ ಯೋಜನೆಗೆ ತಗಲುವ ವೆಚ್ಚವನ್ನು 2020-21ನೇ ಸಾಲಿನ ನೇಕಾರರ ಪ್ಯಾಕೇಜ್ ಯೋಜನೆಯ ಲೆಕ್ಕಶೀರ್ಷಿಕೆ:2851-00-103-0-62-106 ರಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆ ನೀಡಿರುವ ಸಹಮತಿ ಸಂಖ್ಯೆ: ಆಇ 130 ವೆಚ್ಚ-1, 2020, ದಿನಾಂಕ: 15.05.2020 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

26/5/2020
(ಬಿ. ವೆಂಕಟೇಶಮೂರ್ತಿ)
ಸರ್ಕಾರದ ಉಪ ಕಾರ್ಯದರ್ಶಿ
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ(ಜವಳಿ)

**ಇವರಿಗೆ,**

ಜಂಟಿ ನಿರ್ದೇಶಕರು, ಕರ್ನಾಟಕ ವಿಶೇಷ ರಾಜ್ಯ ಪತ್ರ, ವಿಕಾಸ ಸೌಧ, ಬೆಂಗಳೂರು ಇವರಿಗೆ- ಕರ್ನಾಟಕ ವಿಶೇಷ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸಿ 100 ಪ್ರತಿಗಳನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಗೆ ಒದಗಿಸುವಂತೆ ಕೋರಿದೆ.

**ಪ್ರತಿಗಳು:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ)/ (ಇ & ಆರ್.ಎಸ್.ಎ) (ಎ&ಇ), ಕರ್ನಾಟಕ ರಾಜ್ಯ, ಬೆಂಗಳೂರು.
2. ಜವಳಿ ಅಭಿವೃದ್ದಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಶುಭೋದಯ ಕಾಂಪ್ಲೆಕ್ಸ್, ನಂ.86, ರೈಲ್ವೆ ಸಮಾನಾಂತರ ರಸ್ತೆ, ಕುಮಾರಪಾರ್ಕ್ ಪಶ್ಚಿಮ, ಬೆಂಗಳೂರು-560 020.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತ, ಪ್ರಿಯದರ್ಶಿನಿ, ನೇಕಾರ ಭವನ, ವಿದ್ಯಾನಗರ ಹುಬ್ಬಳ್ಳಿ-580 031.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜವಳಿ ಮೂಲ ಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತ, ಮೊದಲನೇ ಮಹಡಿ, ವಸ್ತು ಪ್ರದರ್ಶನ ಕೇಂದ್ರ, ಕಣಬುರಗಿ ಕೈಗಾರಿಕಾ ಪ್ರದೇಶ, ಬೆಳಗಾವಿ- 590 015.
5. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
6. ಜಂಟಿ ನಿರ್ದೇಶಕರು, ಜಿಲ್ಲಾ ಖಜಾನೆ, ಕೆ.ಆರ್.ವೃತ್ತ, ಅಂಬೇಡ್ಕರ್ ರಸ್ತೆ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-1, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ(ಎಂ.ಎಸ್.ಎಂ.ಇ & ಗಣಿ), ವಿಕಾಸ ಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.